ಆಯುಕ್ತರು
ಕಾರ್ಮಿಕ ಇಲಾಖೆ

ಕರ್ನಾಟಕ ಸರ್ಕಾರ

"ಕಾರ್ಮಿಕ ಭವನ", ಐಟಿಐ ಕಾಲೇಜ್ ಕಾಂಪೌಂಡ್,
ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029.
ಕಛೇರಿ:080 2975 3078
ಇಮೇಲ್ : labour.commissioner42@gmail.com

ಸಂಖ್ಯೆ: ಕೆಎಸ್‌ಸಿಎಲ್‌ಇಪಿಎಸ್/ಸಿಎಲ್-07/ಸಿಆರ್-18/2023-24 ದಿನಾಂಕ: 13 /07/2023

## :ಕಛೇರಿ ಆದೇಶ:

**ವಿಷಯ:** ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಕ್ರಮ ಕೈಗೊಳ್ಳುವ ಕುರಿತು.

**ಉಲ್ಲೇಖ:**
1. ಈ ಕಛೇರಿಯ ಪತ್ರ ಸಂಖ್ಯೆ:ಜಂಕಾಆ/ಸಿಎಲ್/ಸಿಆರ್-16/2017-18, ದಿನಾಂಕ:17/08/2017.
2. ಸರ್ಕಾರದ ಆದೇಶ ಸಂಖ್ಯೆ: LD 86 CLC 2012, Bangalore, ದಿನಾಂಕ: 20.10.2012.
3. ಈ ಕಛೇರಿ ಸುತ್ತೋಲೆ ಸಂಖ್ಯೆ:ಕೆಎಸ್‌ಸಿಎಲ್‌ಇಪಿಎಸ್/ಸಿಆರ್-90/2020-21, ದಿನಾಂಕ:16/03/2021.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕದಲ್ಲಿ ಬಾಲಕಾರ್ಮಿಕ ಪುನರ್ವಸತಿ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಹಾಗೂ ಕರ್ನಾಟಕವನ್ನು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಮುಕ್ತ ರಾಜ್ಯವನ್ನಾಗಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವುದು;

1. ಉಲ್ಲೇಖ(1)ರಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಕಲಂ 16 ಹಾಗೂ 17ರಡಿಯಲ್ಲಿ ನಿರೀಕ್ಷಕರಾಗಿ ಅಧಿಸೂಚಿಸಲ್ಪಟ್ಟ ಅಧಿಕಾರಿಗಳ ಹೋಬಳಿವಾರು ತಂಡವನ್ನು ರಚಿಸಿ ಪ್ರತಿಯೊಂದು ತಂಡವೂ ಮಾಸಿಕ ಕನಿಷ್ಠ 15 ತಪಾಸಣೆಗಳನ್ನು ಕೈಗೊಳ್ಳಲು ನಿರ್ದೇಶನ ನೀಡಲಾಗಿದ್ದು, ಅದರನ್ವಯ ಕ್ರಮ ವಹಿಸುವುದು ಹಾಗೂ ವರದಿಯನ್ನು ಸಲ್ಲಿಸುವುದು.
2. ಬಾಲ ಹಾಗೂ ಕಿಶೋರ ಕಾರ್ಮಿಕರ ತಪಾಸಣೆಯಲ್ಲಿ / ದಾಳಿಗಳನ್ನು ನಡೆಸಿ, ತಪಾಸಣೆಗಳಲ್ಲಿ / ದಾಳಿಗಳಲ್ಲಿ ಪತ್ತೆಯಾದ ಬಾಲಕಾರ್ಮಿಕರನ್ನು ಮಕ್ಕಳ ಕಲ್ಯಾಣ ಸಮಿತಿ (Child Welfare Committee) ಯ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಿಗೆ, ಮುಖ್ಯವಾಹಿನಿ ಶಾಲೆಗಳಲ್ಲಿ ಮಕ್ಕಳ ಅರ್ಹತೆಗನುಗುಣವಾಗಿ ದಾಖಲು ಮಾಡಲು ಕ್ರಮ ಕೈಗೊಳ್ಳುವುದು.
3. ಬಾಲ ಹಾಗೂ ಕಿಶೋರ ಕಾರ್ಮಿಕ ದೂರುಗಳನ್ನು ಕೇಂದ್ರ ಸರ್ಕಾರದ Pencil (Platform for effective enforcement for no Child Labour) Portal ಹಾಗೂ National Commisssion for Protection of Child Rights (N.C.P.C.R) ಇವರ portal, ಹಾಗೂ ಸಾಮಾಜಿಕ ಜಾಲತಾಣಗಳಾದ Twitter, Facebook ಹಾಗೂ Whatsapp ಮೂಲಕವು ಸ್ವೀಕರಿಸಿ, ಅನಿರೀಕ್ಷಿತ ದಾಳಿಗಳನ್ನು ನಡೆಸಿ, ಮಕ್ಕಳನ್ನು ರಕ್ಷಿಸಿ ಪುನರ್ವಸತಿಗೊಳಿಸಲು ನಿಯಮಾನುಸಾರ ಕ್ರಮವಹಿಸುವುದು.

4. ಸರ್ಕಾರದ ಉಲ್ಲೇಖ(2)ರ ಪತ್ರದನ್ವಯ ಜಿಲ್ಲಾ ಮಟ್ಟದ ಸಲಹಾ ಸಮಿತಿ, ಜಿಲ್ಲಾಮಟ್ಟದ ಕಾರ್ಯಕಾರಿ ಸಮಿತಿ, ತಾಲ್ಲೂಕು ಮಟ್ಟದ ಬಾಲಕಾರ್ಮಿಕ ನಿರ್ಮೂಲನೆ ಮತ್ತು ಪುನರ್ವಸತಿ ಸೊಸೈಟಿಯ ಸಮಿತಿಗಳ ಸಭೆಯನ್ನು ಸರ್ಕಾರದ ಆದೇಶ ಸಂಖ್ಯೆ:LD 86 CLC 2012, ದಿನಾಂಕ:20/10/2012ರನ್ವಯ ನಡೆಸುವುದು ಮತ್ತು ಸೊಸೈಟಿಯ ಸರ್ವ ಸದಸ್ಯರ ಸಭೆಯನ್ನು ಪ್ರತಿ ವರ್ಷ ನಡೆಸಲು ಕ್ರಮವಹಿಸುವುದು ಹಾಗೂ ನಡವಳಿಗಳನ್ನು ಕೇಂದ್ರ ಕಛೇರಿಗೆ ಕಳುಹಿಸುವುದು.
5. ಜಿಲ್ಲಾ ದಂಡಾಧಿಕಾರಿಗಳ ಜಿಲ್ಲಾ ಕಾರ್ಯಪಡೆ (Task Force) ರನ್ವಯ ಸಭೆಗಳನ್ನು ಹಾಗೂ ತಪಾಸಣೆಗಳನ್ನು ನಡೆಸುವುದು.
6. ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಮುಕ್ತ ಜಿಲ್ಲೆಗಳ ಘೋಷಣೆ ಹೊರಡಿಸಲು ಅವಶ್ಯವಿರುವ ಕೇಂದ್ರ ಸರ್ಕಾರವು ಹೊರಡಿಸಿದ "Standard Operating Procedure for Enforcement of the Child and Adolescent Labour (Prohibition and Regulation) Act, 1986 ಹಾಗೂ ರಾಜ್ಯ ಸರ್ಕಾರದ *"MEMORANDUM OF STANDARD OPERATING PROCEDURES (MSOPs)" FOR DISTRICT ADMINISTRATION TO DECLARAE A DISTRICT AS "CHILD AND ADOLOSCENT LABOUR FREE ZONE-CALFZ"* ಅನ್ನು ಅನುಷ್ಠಾನಕ್ಕಾಗಿ ಕ್ರಮ ಕೈಗೊಳ್ಳುವುದು.
7. ಬಾಲ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು.
8. ಬಾಲ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ನಿಯಮಗಳು-2017 (ಕೇಂದ್ರ) ಹಾಗೂ (ಕರ್ನಾಟಕ) ರ ಅನುಷ್ಠಾನ.
9. ಕೇಂದ್ರ ಕಛೇರಿಯಿಂದ ನೀಡಿದ ನಿರ್ದೇಶನದನ್ವಯ ಬಾಲ ಹಾಗೂ ಕಿಶೋರ ಕಾರ್ಮಿಕರ ಕುರಿತು ಕಾನೂನು ಅರಿವು-ನೆರವು ಕಾರ್ಯಕ್ರಮ, ತರಬೇತಿ ಕಾರ್ಯಕ್ರಮ ಹಾಗೂ ಜನ-ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವುದು.
10. ಬಾಲಕಾರ್ಮಿಕ ಪುನರ್ವಸತಿ ಯೋಜನೆಯಡಿ ಪರಿಶಿಷ್ಟ ಜಾತಿ ಉಪಯೋಜನೆ (ಎಸ್.ಸಿ.ಎಸ್.ಪಿ) ಹಾಗೂ ಗಿರಿಜನ ಉಪಯೋಜನೆ (ಟಿ.ಎಸ್.ಪಿ) ಲೆಕ್ಕಶೀರ್ಷಿಕೆಯಡಿ ಬಿಡುಗಡೆಯಾದ ಅನುದಾನವನ್ನು ಕೇಂದ್ರ ಕಛೇರಿಯ ನಿರ್ದೇಶನದನ್ವಯ ಬಳಕೆ ಮಾಡುವುದು ಹಾಗೂ ವರದಿಯನ್ನು ಪ್ರತಿ ತಿಂಗಳು ಸಲ್ಲಿಸುವುದು.
11. ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯನ್ನು ಪ್ರತಿ ವರ್ಷ ನವೀಕರಿಸಲು ಕ್ರಮವಹಿಸುವುದು.
12. "ಜಿಲ್ಲಾ ಬಾಲ ಹಾಗೂ ಕಿಶೋರಕಾರ್ಮಿಕ ಪುನರ್ವಸತಿ ನಿಧಿ ಯೋಜನೆ"ಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:LD 124 CLC 2016, ದಿನಾಂಕ:01/03/2019ರನ್ವಯ ಸ್ಥಾಪಿಸುವುದು ಹಾಗೂ ನಿರ್ವಹಿಸುವುದು ಹಾಗೂ ವರದಿಯನ್ನು ಸಲ್ಲಿಸುವುದು.
13. ಸರ್ಕಾರದ ಆದೇಶ ಸಂಖ್ಯೆ:ಕಾಇ 52 ಸಿಎಲ್‌ಸಿ 2017, ದಿನಾಂಕ:11/02/2021ರಲ್ಲಿ ಸರ್ಕಾರವು ಆಯಾ ಜಿಲ್ಲೆಯ ಸಹಾಯಕ ಕಾರ್ಮಿಕ ಆಯುಕ್ತರು ಅಥವಾ ಕಾರ್ಮಿಕ ಅಧಿಕಾರಿಗಳನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡಿದ್ದು, ಅದರನ್ವಯ ಕ್ರಮವಹಿಸುವುದು.
14. ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳಲ್ಲಿ ಎರಡು ಬ್ಯಾಂಕ್ ಖಾತೆಗಳನ್ನು ನಿರ್ವಹಿಸುವುದು. ರಾಜ್ಯ ಸರ್ಕಾರದಿಂದ ಬಿಡುಗಡೆಯಾಗುವ ಅನುದಾನಕ್ಕೆ ಒಂದು ಖಾತೆ

ಹಾಗೂ ಕಾರ್ಪಸ್ ನಿಧಿಗೆ ಒಂದು ಖಾತೆಯನ್ನು ನಿರ್ವಹಿಸುವುದು. ಈಗಾಗಲೇ ಹೆಚ್ಚು ಖಾತೆಗಳನ್ನು ತೆರೆದಿದ್ದಲ್ಲಿ ಅಂತಹ ಖಾತೆಗಳನ್ನು ನಿಷ್ಕ್ರಿಯಗೊಳಿಸಲು ಕ್ರಮ ಕೈಗೊಳ್ಳುವುದು ಹಾಗೂ ಸಹಾಯಕ ಕಾರ್ಮಿಕ ಆಯುಕ್ತರು ಅಥವಾ ಕಾರ್ಮಿಕ ಅಧಿಕಾರಿಗಳು ಡ್ರಾಯಿಂಗ್ ಆಫೀಸರ್ ಆಗಿ ಕಾರ್ಯನಿರ್ವಹಿಸುವುದು.

**15.** ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸ್ಯಟಿಗಳ ಕಛೇರಿಗಳನ್ನು ಆಡಳಿತಾತ್ಮಕ ದೃಷ್ಠಿಯಿಂದ ಆಯಾ ಜಿಲ್ಲೆಗಳ ಸಹಾಯಕ ಕಾರ್ಮಿಕ ಆಯುಕ್ತರು ಅಥವಾ ಕಾರ್ಮಿಕ ಅಧಿಕಾರಿಗಳ ಕಛೇರಿಗೆ ಸ್ಥಳಾಂತರಿಸುವುದು ಮತ್ತು ಈ ಅಧಿಕಾರಿಗಳ ಅಧೀನದಲ್ಲಿ ಕಾರ್ಯನಿರ್ವಹಿಸುವುದು.

16. ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳ ಲೆಕ್ಕ ತಪಾಸಣೆ ಮಾಡಿಸಿ ವರದಿಯನ್ನು ಸಲ್ಲಿಸುವುದು.

17. ಕೇಂದ್ರ ಕಛೇರಿಯಿಂದ ಬಿಡುಗಡೆಯಾಗುವ ಅನುದಾನವನ್ನು ಲೆಕ್ಕಶೀರ್ಷಿಕೆವಾರು ವಿನಿಯೋಗಿಸುವುದು ಹಾಗೂ ಹಣ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವುದು ಮತ್ತು ಕೇಂದ್ರ ಕಛೇರಿಯಿಂದ ಬಿಡುಗಡೆಯಾಗುವ ಅನುದಾನವನ್ನು ಬೇರೆ ಲೆಕ್ಕಶೀರ್ಷಿಕೆಯಡಿ ಬಳಕೆ ಮಾಡಿಕೊಳ್ಳಲು ಕೇಂದ್ರ ಕಛೇರಿಯ ಅನುಮತಿಯನ್ನು ಪಡೆಯುವುದು.

18. ಕೇಂದ್ರ ಕಛೇರಿಗೆ ಸಲ್ಲಿಸಬೇಕಾದ ವರದಿಗಳನ್ನು ಮಾಸಿಕ, ತ್ರೈಮಾಸಿಕ, ಎಸ್.ಸಿ.ಎಸ್.ಪಿ, ಟಿ.ಎಸ್.ಪಿ, ವಾರ್ಷಿಕ ವರದಿ, ಬ್ಯಾಂಕ್ ಮ್ಯಾಂಡೇಟ್ ಫಾರಂ ಹಾಗೂ ಇತರೆ ವರದಿಗಳನ್ನು ಕಡ್ಡಾಯವಾಗಿ ಸಲ್ಲಿಸುವುದು.

19. ಉಲ್ಲೇಖ(3)ರನ್ವಯ ಎಲ್ಲಾ ಜಿಲ್ಲೆಗಳ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳಲ್ಲಿನ ಸಿಬ್ಬಂದಿಗಳು ಕೆಲಸ ಕಾರ್ಯಗಳನ್ನು ನಿರ್ವಹಿಸುವುದು.

20. ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸ್ಯಟಿಯ ಸದಸ್ಯ ಕಾರ್ಯದರ್ಶಿಗಳು ಮೇಲ್ಕಂಡ ಅಂಶಗಳ ಕುರಿತು ವರ್ಷದ ಪ್ರಾರಂಭದಲ್ಲಿ ಮಾಸಿಕವಾರು ಕಾರ್ಯಕ್ರಮಗಳನ್ನು ರೂಪಿಸಿಕೊಂಡು ಕೇಂದ್ರ ಕಛೇರಿಯಿಂದ ಅನುಮತಿ ಪಡೆದು ಪ್ರತಿ ತಿಂಗಳು ಕಾರ್ಯಕ್ರಮಗಳನ್ನು ನಡೆಸುವುದು ಹಾಗೂ ಪ್ರತಿ ತಿಂಗಳು ವರದಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸುವುದು.

21. ಉಪ ಕಾರ್ಮಿಕ ಆಯುಕ್ತರು ತಮ್ಮ ಪ್ರಾದೇಶಿಕ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳ ಮೇಲ್ಕಂಡ ಅಂಶಗಳ ಕುರಿತು ಪರಿಶೀಲಿಸಿ, ಪ್ರತಿ ತಿಂಗಳು ವರದಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸುವುದು ಹಾಗೂ ಪ್ರತಿ 03 ತಿಂಗಳಿಗೊಮ್ಮೆ ತಮ್ಮ ಪ್ರಾದೇಶಿಕ ವ್ಯಾಪ್ತಿಗೆ ಬರುವ ಜಿಲ್ಲೆಗಳ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳ ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸಿ ವರದಿಯನ್ನು ಹಾಗೂ ಸಭೆಯ ನಡವಳಿಯನ್ನು ಕೇಂದ್ರ ಕಛೇರಿಗೆ ಕಳುಹಿಸಲು ಈ ಮೂಲಕ ಸೂಚಿಸಿದೆ.

**ಆಯುಕ್ತರು**
**ಕಾರ್ಮಿಕ ಇಲಾಖೆ**

**ಇವರಿಗೆ,**

1. ಎಲ್ಲಾ ಉಪ ಕಾರ್ಮಿಕ ಆಯುಕ್ತರು
2. ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು
3. ಎಲ್ಲಾ ಕಾರ್ಮಿಕ ಅಧಿಕಾರಿಗಳು

**ಪ್ರತಿಯನ್ನು,**

ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು